ಕಾರ್ಯನಿರ್ವಹಿಸುತ್ತಿದೆ. ಹಣಕಾಸು ಲಭ್ಯತೆ ಆಧಾರದ ಮೇಲೆ ಹೊಸ ಸ್ಕ್ಯಾನಿಂಗ್ ಮೆಷಿನ್ ಒದಗಿಸುವ ಕುರಿತು ಕ್ರಮ ವಹಿಸಬೇಕಾಗುತ್ತದೆ.

ಮಹಿಳಾ ವೈದ್ಯರ ನೇಮಕಾತಿ

192(379) ಶ್ರೀ ಅಮರೇಶ್ (ಮುಳಬಾಗಿಲು):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ:–

(ಅ) ಮುಳಬಾಗಿಲು ತಾಲ್ಲೂಕಿನ ಹೋಬಳಿಗಳಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಮಹಿಳಾ ವೈದ್ಯರು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಮಹಿಳಾ ವೈದ್ಯರ ನೇಮಕಾತಿಯನ್ನು ಯಾವ ಅವಧಿಯೊಳಗಾಗಿ ಪೂರ್ಣಗೊಳಿಸಲಾಗುವುದು;

(ಇ) ಹೋಬಳಿಗಳ ಆಸ್ಪತ್ರೆಯಲ್ಲಿ ರಾತ್ರಿಯ ಸಮಯದಲ್ಲಿಯೂ ವೈದ್ಯರುಗಳು ಇರುವ ಹಾಗೆ ಸರ್ಕಾರ ಕ್ರಮ ಕೈಗೊಂಡಿದೆಯೇ? (ವಿವರ ನೀಡುವುದು)

ಶ್ರಿ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ "ಮಹಿಳಾ ವೈದ್ಯಾಧಿಕಾರಿ" ಎಂಬ ವೃಂದ ಅಸ್ತಿತ್ವದಲ್ಲಿರುವುದಿಲ್ಲ.

(ಆ) ಮುಳಬಾಗಿಲು ತಾಲ್ಲೂಕಿನಲ್ಲಿ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು. ಈ ಆರೋಗ್ಯ ಕೇಂದ್ರಗಳಲ್ಲಿನ ಎಲ್ಲಾ 17 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಭರ್ತಿಯಾಗಿವೆ. ಕಾರ್ಯನಿರತ ವೈದ್ಯರ ಪೈಕಿ ಇಬ್ಬರು ಮಹಿಳಾ ವೈದ್ಯರು ಸೇರಿದ್ದಾರೆ.

(ಇ) ಮೇಲ್ಕಂಡ 17 ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪೈಕಿ, 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು 27 x 7 ಕಾರ್ಯನಿರ್ವಹಿಸುವ ಕೇಂದ್ರಗಳಾಗಿದ್ದು, ಅವುಗಳಲ್ಲಿ ದಿನದ 24 ಗಂಟೆ ಹೆರಿಗೆ ಸೌಲಭ್ಯ ಲಭ್ಯವಿದೆ. ಈ ಪೈಕಿ ಹೋಬಳಿ ಮಟ್ಟದಲ್ಲಿ 04 ಪ್ರಾಥಮಿಕ ಆರೋಗ್ಯ ಕೇಂದ್ರಗಳು (ಅಂದರೆ ತಾಯಿಲೂರು ಟೈರ್‌ಕೂರ್, ಅವನಿ ಮತ್ತು ನಂಗಳಿ) 24 x 7ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತಿವೆ. ಸದರಿ ಕೇಂದ್ರಗಳಲ್ಲಿ 03 ಶುಶ್ರೂಷಕರು ಪಾಳಿಯ ಮೇಲೆ ದಿನದ 24 ಗಂಟೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ವೈದ್ಯಾಧಿಕಾರಿಗಳು ರಾತ್ರಿಯ ವೇಳೆ ಕಾಲ್‌ಡ್ಯೂಟಿ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ.